**All India Radio: Bangalore**
**Regional Bulletin In Kannada**
**16.01.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**16.01.2026 / 2.30 p.m.**
**<><><><>**

ಮುಖ್ಯಾಂಶಗಳು

1. ಮುಖ್ಯಮಂತ್ರಿ ಸ್ಥಾನದ ವಿಚಾರ : ಸಾರ್ವಜನಿಕವಾಗಿ ಚರ್ಚೆ ಸಲ್ಲದು ; ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ
2. ಕೇಂದ್ರ ಸರ್ಕಾರದ ಮೇಲಿನ ದ್ವೇಷದಿಂದ ವಿಶೇಷ ಅಧಿವೇಶನ; ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪ
3. ಉತ್ತರ ಕನ್ನಡದ ದಾಂಡೇಲಿಯಲ್ಲಿ ಹಾರ್ನ್‌ಬಿಲ್ ಹಬ್ಬ
4. ಅಖಿಲ ಭಾರತ ಅಂತರ್ ವಿಶ್ವವಿದ್ಯಾಲಯ ಅಥ್ಲೆಟಿಕ್ ಚಾಂಪಿಯನ್‌ಶಿಪ್ ; ಸಮಗ್ರ ಚಾಂಪಿಯನ್ ಆಗಿ ಹೊರಹೊಮ್ಮಿದ ಮದ್ರಾಸ್ ವಿಶ್ವವಿದ್ಯಾಲಯ

<><><><>

ಮುಖ್ಯಮಂತ್ರಿ ಸ್ಥಾನದ ವಿಚಾರ ತಮ್ಮ, ಮುಖ್ಯಮಂತ್ರಿ ಹಾಗೂ ಹೈಕಮಾಂಡ್ ನಡುವಿನ ವಿಚಾರ. ಇದು ಸಾರ್ವಜನಿಕವಾಗಿ ಚರ್ಚೆ ಮಾಡುವ ವಿಷಯವಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ದೆಹಲಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್‌ಗಾಂಧಿ ಅವರ ಜೊತೆ ಮುಖ್ಯಮಂತ್ರಿ ಸ್ಥಾನದ ಬಗ್ಗೆ ಚರ್ಚೆ ಮಾಡಲಾಯಿತೇ ಎಂದು ಸುದ್ದಿಗಾರರ ಪ್ರಶ್ನೆಗೆ ಅವರು ಈ ರೀತಿ ಪ್ರತಿಕ್ರಿಯಿಸಿದ್ದಾರೆ. ಪಕ್ಷದ ನಾಯಕರನ್ನು ಭೇಟಿ ಮಾಡುವ ಉದ್ದೇಶದಿಂದಲೇ ದೆಹಲಿಗೆ ಆಗಮಿಸಿದ್ದೇನೆ. ಇನ್ನೊಂದೆಡೆ, ನೀರಾವರಿ ಯೋಜನೆಗಳಿಗೆ ಸಂಬಂಧಿಸಿದಂತೆ ಕೆಲವು ಪ್ರಮುಖ ಕಾನೂನಾತ್ಮಕ ವಿಚಾರಗಳನ್ನು ಚರ್ಚೆ ಮಾಡಬೇಕಾಗಿದ್ದು, ಹೀಗಾಗಿ ಕಾನೂನು ತಜ್ಞರು ಹಾಗೂ ಕೇಂದ್ರ ಸಚಿವರನ್ನು ಭೇಟಿ ಮಾಡಲಾಗುವುದು ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

<><><><>

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಜಿ ರಾಮ್ ಜಿ ಕಾಯ್ದೆಯ ಬಗ್ಗೆ ರಾಜ್ಯ ಸರ್ಕಾರ ವಿಶೇಷ ಅಧಿವೇಶನ ನಡೆಸಲು ಮುಂದಾಗಿರುವುದು, ಕೇಂದ್ರ ಸರ್ಕಾರದ ಮೇಲಿನ ದ್ವೇಷ ಸಾಧನೆಯ ಉದ್ದೇಶವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತ ಚರ್ಚೆಯ ಬದಲು ನಾಡಿನ ಸಮಸ್ಯೆಗಳ ಬಗ್ಗೆ ಚರ್ಚಿಸಿ, ಜನತೆಯ ಒಳತಿಗಾಗಿ ಸದನ ನಡೆಸಿ, ಅದರ ಪಾವಿತ್ರ್ಯತೆ ಉಳಿಸುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಳೆದ ಎರಡೂವರೆ ವರ್ಷಗಳಿಂದ ಕೇಂದ್ರದ ಜನಪರ ಯೋಜನೆಗಳ ಕುರಿತು ಅಪಪ್ರಚಾರ ಮಾಡುತ್ತಾ, ತಮ್ಮ ಅಧಿಕಾರದ ಭದ್ರತೆಗಾಗಿ ಜನರನ್ನು ಎತ್ತಿಕಟ್ಟುವದರಲ್ಲಿ ಕಾಲ ಕಳೆದಿದ್ದಾರೆ ಎಂದು ದೂರಿದ ಅವರು, ಮುಖ್ಯಮಂತ್ರಿಯವರು ನಾಡಿನ ಸಮಸ್ಯೆಗಳತ್ತ ಗಮಹರಿಸುವುದು ಸೂಕ್ತ ಎಂದು

ಹೇಳಿದರು. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಯವರು ರಾಜ್ಯ ರಾಜಕಾರಣಕ್ಕೆ ಮರಳಿದರೆ ತಪ್ಪೇನಿಲ್ಲ. ರಾಜ್ಯದಲ್ಲಿ ಪಾದಯಾತ್ರೆ ನಡೆಸುವ ಬಗ್ಗೆ ಯಾವುದೇ ಗೊಂದಲವಿಲ್ಲ ಎಂದರು. ರಾಜ್ಯದಲ್ಲಿ ಹೋರಾಟ, ಪಾದಯತ್ರೆ ಯಾವುದೇ ಮಾಡಿದರೂ ಪಕ್ಷದ ವರಿಷ್ಠರ ಗಮನಕ್ಕೆ ತಂದು, ಚರ್ಚಿಸಿ ನಿರ್ಧಾರಕ್ಕೆ ಬರಲಾಗುತ್ತದೆ. ಬಿಜೆಪಿ ನೂತನ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಇದೇ ೧೯ ಮತ್ತು ೨೦ರಂದು ದೆಹಲಯಲ್ಲಿ ನಡೆಯಲಿದೆ. ಈ ಸಭೆಯಲ್ಲಿ ಭಾಗವಹಿಸಿ, ಪಾದಯತ್ರೆಯ ಬಗ್ಗೆ ವರಿಷ್ಠರೊಂದಿಗೆ ಚರ್ಚಿಸಿ, ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

<><><>

ಹಾರ್ನ್‌ಬಿಲ್ ಸಂರಕ್ಷಣೆಗೆ ಸಮಾಜ, ಸಾರ್ವಜನಿಕರು, ಮಾಧ್ಯಮಗಳ ಸಹಭಾಗಿತ್ವ ಮುಖ್ಯ. ಅರಣ್ಯ ಇಲಾಖೆ ಮಾತ್ರವಲ್ಲ, ಎಲ್ಲರೂ ಕೈಜೋಡಿಸಿ, ಸಮಾಜದಲ್ಲಿ ಪಕ್ಷಿಗಳ ಕುರಿತು ಮಹತ್ವ ಮೂಡಿಸಬೇಕು. ಶಾಲಾ ಮಕ್ಕಳು ಮತ್ತು ಸ್ಥಳೀಯರಿಗೆ ಹಾರ್ನ್‌ಬಿಲ್ ಜೀವನ ಕ್ರಮ ಅರಿವು ಮೂಡಿಸುವುದು ಮುಖ್ಯ ಎಂದು ರಾಜ್ಯ ಅಪರ ಪ್ರಧಾನ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕುಮಾರ್ ಹೇಳಿದ್ದಾರೆ. ಉತ್ತರಕನ್ನಡ ಜಿಲ್ಲೆಯ ದಾಂಡೇಲಿಯ ಹಾರ್ನ್‌ಬಿಲ್ ಭವನದಲ್ಲಿ ಹಾರ್ನ್‌ಬಿಲ್ ಹಕ್ಕಿ ಹಬ್ಬಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದೇಶದಲ್ಲಿ ಕಂಡುಬರುವ ಒಂಬತ್ತು ಪ್ರಭೇದದ ಹಾರ್ನ್‌ಬಿಲ್‌ಗಳಲ್ಲಿ ನಾಲ್ಕು ಪ್ರಭೇದಗಳು ದಾಂಡೇಲಿಯ ಸುತ್ತಮುತ್ತ ಕಂಡುಬರುತ್ತದೆ. ಇದು ರಾಜ್ಯಕ್ಕೆ ಹಾಗೂ ಈ ಪ್ರದೇಶಕ್ಕೆ ಹೆಮ್ಮೆಯ ವಿಚಾರ ಎಂದರು. ಹಳಿಯಾಳ ವಿಭಾಗದ ಡಿಎಫ್‌ಒ ಪ್ರಶಾಂತ್ ಕುಮಾರ್ ಮಾತನಾಡಿ, ನದಿ, ಪರಿಸರ, ಅರಣ್ಯ, ವನ್ಯಜೀವಿಗಳ ಹಾಗೂ ಪಕ್ಷಿಗಳ ಸಂರಕ್ಷಣೆಯ ಮಹತ್ವ ಸಾರುವುದೇ ಹಾರ್ನಬಿಲ್ ಹಬ್ಬದ ವಿಶೇಷ ಎಂದು ಹೇಳಿದರು.

<><><>

ಮಂಗಳೂರು ವಿಶ್ವವಿದ್ಯಾನಿಲಯವು ೨೦೨೫ರ ಯುಐ ಗ್ರೀನ್‌ಮೆಟ್ರಿಕ್ ಶ್ರೇಯಾಂಕದಲ್ಲಿ ರಾಷ್ಟ್ರ ಮಟ್ಟದಲ್ಲಿ ಮೂರನೇ ಸ್ಥಾನ ಹಾಗೂ ಜಾಗತಿಕವಾಗಿ ೧೨೭ನೇ ಸ್ಥಾನ ಪಡೆದು ಸಾಧನೆ ಮಾಡಿದೆ. ಇಂಡೋನೇಷ್ಯಾ ವಿಶ್ವವಿದ್ಯಾಲಯವು ಬಿಡುಗಡೆ ಮಾಡಿದ ಯುಐ ಗ್ರೀನ್‌ಮೆಟ್ರಿಕ್ ವಿಶ್ವವಿದ್ಯಾಲಯ ಶ್ರೇಯಾಂಕದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ ಉತ್ತಮ ಸ್ಥಾನ ಪಡೆದಿದೆ. ಗ್ರೀನ್‌ಮೆಟ್ರಿಕ್ ಶ್ರೇಯಾಂಕವು ಹಸಿರು ಕ್ಯಾಂಪಸ್ ಮತ್ತು ಪರಿಸರ ಸುಸ್ಥಿರತೆಯನ್ನು ಆಧರಿಸಿದ್ದು, ಪರಿಸರಕ್ಕೆ ವಿಶ್ವವಿದ್ಯಾಲಯಗಳ ಬದ್ಧತೆಯ ಆಧಾರದಲ್ಲಿ ಈ ಶ್ರೇಯಾಂಕ ನೀಡಲಾಗುತ್ತದೆ. ರಾಜ್ಯದ ಸರ್ಕಾರಿ ವಿಶ್ವವಿದ್ಯಾನಿಲಯಗಳ ಪೈಕಿ ಮಂಗಳೂರು ವಿಶ್ವವಿದ್ಯಾಲಯಕ್ಕೆ ಪ್ರಥಮ ಸ್ಥಾನ ಲಭಿಸಿದೆ. ಇದು ಮಂಗಳೂರು ವಿಶ್ವವಿದ್ಯಾಲಯಕ್ಕೆ ಸಂದ ಗೌರವವಾಗಿದೆ ಎಂದು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊಫೆಸರ್ ಪಿ.ಎಲ್.ಧರ್ಮ ಹರ್ಷ ವ್ಯಕ್ತಪಡಿಸಿದ್ದಾರೆ.

<><><>

ಶೀರೂರು ಮಠಾಧೀಶ ಭಾವೀ ಪರ್ಯಾಯ ಪೀಠಾಧಿಪತಿ ಶ್ರೀ ವೇದವರ್ಧನ ತೀರ್ಥ ಶ್ರೀಪಾದರು ಉಡುಪಿ ಜಿಲ್ಲೆಯ ಅಂಬಾಗಿಲು ಜಂಕ್ಷನ್ ಬಳಿ ನೂತನವಾಗಿ ನಿರ್ಮಿಸಲು ಉದ್ದೇಶಿಸಿರುವ ಪರಶುರಾಮ ದ್ವಾರದ ಗುದ್ದಲಿ ಪೂಜೆಯನ್ನು ಇಂದು ನೆರವೇರಿಸಿದರು. ತಮ್ಮ ಪ್ರಥಮ ಪರ್ಯಾಯದ ಸಂದರ್ಭದಲ್ಲಿ ಪರಶುರಾಮ ದ್ವಾರ

ನಿರ್ಮಿಸಲು ಶ್ರೀಗಳು ಸಂಕಲ್ಪಿಸಿದ್ದು, ಅನೇಕ ಗಣ್ಯರ ಸಮ್ಮುಖದಲ್ಲಿ ಗುದ್ದಲಿ ಪೂಜೆ ನೆರವೇರಿಸಿರುವುದಕ್ಕೆ ಅವರು ಸಂತಸ ವ್ಯಕ್ತಪಡಿಸಿದರು.

<><><><>

ದಾವಣಗೆರೆ ಜಿಲ್ಲೆಯಲ್ಲಿ ಪತ್ತೆಯಾಗಿರುವ ೧೭ ಬಾಲ ಕಾರ್ಮಿಕರ ಪುನರ್ವಸತಿಗೆ ಕ್ರಮ ವಹಿಸುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಕರೆಣ್ಣವರ್, ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಕಾರ್ಮಿಕ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಕ್ಕಳ ರಕ್ಷಣಾ ಘಟಕ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಸ್ವಯಂಸೇವಾ ಸಂಸ್ಥೆಗಳು ಒಟ್ಟಾಗಿ ಪಾಲಕರ ವಶಕ್ಕೆ ನೀಡಿದ ಮಕ್ಕಳ ಬಗ್ಗೆ ಮಾಹಿತಿಯನ್ನು ಕಲೆಹಾಕಿ, ಅವರ ಮೇಲೆ ನಿಗಾವಹಿಸಬೇಕು. ಇಲ್ಲವಾದಲ್ಲಿ ಬಡತನ ಅಥವಾ ಕೌಟುಂಬಿಕ ಆರ್ಥಿಕ ಪರಿಸ್ಥಿತಿಯು ಅವರನ್ನು ಮತ್ತೆ ಬಾಲಕಾರ್ಮಿಕರನ್ನಾಗಿ ಮಾಡಬಹುದು. ಆದುದರಿಂದ ಮಕ್ಕಳು ಮತ್ತು ಪೋಷಕರೊಂದಿಗೆ ಕಡ್ಡಾಯವಾಗಿ ಆಪ್ತ ಸಮಾಲೋಚನೆ ನಡೆಸುವಂತೆ ನಿರ್ದೇಶಿಸಿದರು. ಪ್ರಸಕ್ತ ಸಾಲಿನಲ್ಲಿ ಇದುವರೆಗೆ ೧೭ ಬಾಲ ಕಾರ್ಮಿಕ ಪ್ರಕರಣಗಳನ್ನು ಪತ್ತೆಹಚ್ಚಿದ್ದು, ಆ ಬಾಲಕಾರ್ಮಿಕರು ಶಾಲೆಗೆ ಹೋಗುತ್ತಿದ್ದಾರೆ ಅಥವಾ ಪುನಃ ಕೆಲಸಕ್ಕೆ ಹೋಗುತ್ತಿದ್ದಾರೆ ಎಂಬುದರ ಬಗ್ಗೆ ವಿಸ್ತೃತವಾಗಿ ವರದಿ ನೀಡುವಂತೆ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

<><><><>

ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆಯ ಸ್ವರಾಜ್ ಮೈದಾನದಲ್ಲಿ ಕಳೆದ ಐದು ದಿನಗಳಿಂದ ನಡೆದ ೮೫ನೇ ಅಖಿಲ ಭಾರತ ಅಂತರ್ ವಿಶ್ವವಿದ್ಯಾನಿಲಯ ಮಟ್ಟದ ಅಥ್ಲೆಟಿಕ್ ಚಾಂಪಿಯನ್‌ಶಿಪ್ ಇಂದು ಕೊನೆಗೊಂಡಿದ್ದು, ಮದ್ರಾಸ್ ವಿಶ್ವವಿದ್ಯಾನಿಲಯ ತಂಡ ೧೩೪ ಅಂಕಗಳೊಂದಿಗೆ ಪಾರಮ್ಯ ಮೆರೆದಿದ್ದು, ಕೂಟದ ಸಮಗ್ರ ಚಾಂಪಿಯನ್ ಆಗಿ ಹೊರಹೊಮ್ಮಿತು.  ಕಳೆದ ಬಾರಿಯ ಸಮಗ್ರ ಚಾಂಪಿಯನ್ ಆಗಿದ್ದ ಮಂಗಳೂರು ವಿಶ್ವವಿದ್ಯಾನಿಲಯ ತಂಡ ೧೦೯ ಅಂಕಗಳನ್ನು ಪಡೆದು, ದ್ವಿತೀಯ ಸ್ಥಾನದ ಪಟ್ಟ ಅಲಂಕರಿಸಿತು.  ಮೂರನೇ ಸ್ಥಾನವನ್ನು ೮೯ ಅಂಕಗಳೊಂದಿಗೆ ಚಂಡೀಗಢ ವಿಶ್ವವಿದ್ಯಾಲಯ ತನ್ನದಾಗಿಸಿಕೊಂಡಿತು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಆಶ್ರಯದಲ್ಲಿ ಮೂಡುಬಿದಿರೆಯ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಸಹಯೋಗದಲ್ಲಿ ನಡೆದ ಈ ಕ್ರೀಡಾಕೂಟದಲ್ಲಿ  ದೇಶದ ೩೧೨ ವಿಶ್ವವಿದ್ಯಾಲಯಗಳ ೪ ಸಾವಿರದ ೨೮೮ ಅಥ್ಲೀಟ್‌ಗಳು ಭಾಗವಹಿಸಿದ್ದರು.

<><><><>

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ, ಭತ್ತ, ಬಿಳಿಜೋಳ ಖರೀದಿಸಲು ಜಿಲ್ಲೆಯ ೭ ತಾಲೂಕು ಕೇಂದ್ರಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ಆದರೆ ನಿನ್ನೆಯಿಂದ ಆರಂಭವಾಗಬೇಕಾಗಿದ್ದ ಖರೀದಿಯನ್ನು ತಾಂತ್ರಿಕ ಕಾರಣಗಳಿಂದ ತಾತ್ಕಾಲಿಕವಾಗಿ ಮುಂದೂಡಲಾಗಿದೆ. ರಾಗಿ ಚೀಲಗಳು ಸರಬರಾಜು ಆದ ಕೂಡಲೇ ಖರೀದಿ ಪ್ರಕ್ರಿಯೆ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿದ ಅವರು, ೨೦೨೫ ರ ಅಕ್ಟೋಬರ್ ೧ ರಿಂದ ರಾಗಿ ಖರೀದಿಗಾಗಿ

ನೋಂದಣಿ ಪ್ರಕ್ರಿಯೆ ಆರಂಭಿಸಲಾಗಿದೆ. ಡಿಸೆಂಬರ್ ೧೫ ರವರೆಗೆ ಜಿಲ್ಲೆಯಲ್ಲಿ ೭ ಸಾವಿರದ ೩೯೨ ರೈತರಿಂದ ಒಟ್ಟು ೧ ಲಕ್ಷದ ೫೭ ಸಾವಿರದ ೪೨೮ ಕ್ವಿಂಟಲ್ ರಾಗಿ ಖರೀದಿಗಾಗಿ ನೋಂದಾಯಿಸಿಕೊಳ್ಳಲಾಗಿದೆ. ಗೋಣಿಚೀಲಗಳ ಪೂರೈಕೆ ವಿಳಂಬವಾಗಿರುವ ಕಾರಣ ಖರೀದಿಯನ್ನು ಆರಂಭಿಸಲಾಗಿಲ್ಲ ಎಂದು ವಿವರಿಸಿದ್ದಾರೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲಾ ತಂಬಾಕು ನಿಯಂತ್ರಣ ಘಟಕದಿಂದ ಕೋಟ್ಪಾ-೨೦೦೩ ಕಾಯ್ದೆ ಜಾರಿಗೊಳಿಸಲಾಗಿದ್ದು, ಇದರ ಅನ್ವಯ ೨೦೨೫ರ ಏಪ್ರಿಲ್‌ನಿಂದ ಅಕ್ಟೋಬರ್ ವರೆಗೆ ಜಿಲ್ಲೆಯಾದ್ಯಂತ ವಿವಿಧ ಅಂಗಡಿಗಳ ಮೇಲೆ ದಾಳಿ ನಡೆಸಿದ್ದು, ನಿಯಮಗಳ ಉಲ್ಲಂಘನೆ ಮಾಡಿದವರ ವಿರುದ್ಧ ಸೆಕ್ಷನ್ ೪ರ ಅಡಿಯಲ್ಲಿ ೫೩೮ ಪ್ರಕರಣ ದಾಖಲಿಸಿ, ೭೯ ಸಾವಿರದ ೨೪೧ ರೂಪಾಯಿ ದಂಡ ಸಂಗ್ರಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಶೈಕ್ಷಣಿಕ ಸಂಸ್ಥೆಗಳ ಸುತ್ತ ೧೦೦ ಗಜ ಅಂತರದಲ್ಲಿ ತಂಬಾಕು ಮಾರಾಟ ನಿಷೇಧ ಮಾಡಲಾಗಿದೆ. ಆದರೂ ತಂಬಾಕು ಮಾರಾಟ ಮಾಡಿದರೆ, ಅಂತವರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು. ಬೀದಿ ನಾಯಿ ಹಾವಳಿ ನಿಯಂತ್ರಣದ ನಿಟ್ಟಿನಲ್ಲಿ ಅವುಗಳಿಗೆ ಸಂತಾನಹರಣ ಚಿಕಿತ್ಸೆ ಮಾಡಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಅವರು ಸೂಚಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>